**National**
**Kannada**
**17.04.2026 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ೨೦೨೯ರ ಲೋಕಸಭಾ ಚುನಾವಣೆಗೆ ಮಹಿಳಾ ಮೀಸಲಾತಿ ಜಾರಿ ಕೇಂದ್ರ ಸರ್ಕಾರದ ಗುರಿ- ಲೋಕಸಭೆಯಲ್ಲಿ ಗೃಹ ಸಚಿವ ಅಮಿತ್ ಶಾ

೨. ಕಳೆದ ಹಣಕಾಸು ವರ್ಷದಲ್ಲಿ ದಾಖಲೆಯ ೫೫ ಸಾವಿರಕ್ಕೂ ಹೆಚ್ಚು ನವೋದ್ಯಮಗಳಿಗೆ ಕೇಂದ್ರ ಸರ್ಕಾರದಿಂದ ಮಾನ್ಯತೆ

೩. ಶಾಂಘೈ ಸಹಕಾರ ಸಂಘಟನೆಯ ಮುಂದಿನ ಕಾರ್ಯತಂತ್ರ ಕುರಿತು ಭಾರತ -ಚೀನಾ ಸಮಾಲೋಚನೆ

೪. ಹಜ್ ಯಾತ್ರೆ: ಸೌದಿ ಅರೇಬಿಯಾಕ್ಕೆ ನಾಳೆ ಭಾರತದ ಮೊದಲ ತಂಡ ಪ್ರಯಾಣ

೫. ಭಾರತ - ದಕ್ಷಿಣ ಆಫ್ರಿಕಾ ವನಿತಾ ತಂಡಗಳ ನಡುವಿನ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿ; ಇಂದು ಮೊದಲ ಪಂದ್ಯ

**<>><><*><><<>**

ಕ್ಷೇತ್ರ ಮರುವಿಂಗಣೆಗೆ ಸಂವಿಧಾನದಲ್ಲಿ ಅವಕಾಶವಿದ್ದು, ಇದರಿಂದ ಪ್ರತಿ ಮತಕ್ಷೇತ್ರದ ಮತದಾರರ ಸಂಖ್ಯೆಯನ್ನು ತರ್ಕಬದ್ಧಗೊಳಿಸಲು ಸಾಧ್ಯವಾಗಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಸಂವಿಧಾನದ ೧೩೧ನೇ ತಿದ್ದುಪಡಿ, ಮಸೂದೆ, ಕ್ಷೇತ್ರ ಮರುವಿಂಗಡಣೆ ಮಸೂದೆ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾಯ್ದೆ ತಿದ್ದುಪಡಿ ಮಸೂದೆಗಳ ಮೇಲಿನ ಚರ್ಚೆಗೆ ಉತ್ತರಿಸಿದ ಅವರು, ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆಯಿಂದ ಪರಿಶಿಷ್ಟ ಸಮುದಾಯಗಳ ಮೀಸಲು ಕ್ಷೇತ್ರಗಳ ಸಂಖ್ಯೆ ಹೆಚ್ಚಾಗಲಿದೆ. ಈ ಮಸೂದೆಗಳ ಮುಖ್ಯ ಉದ್ದೇಶ ೨೦೨೯ರ ಲೋಕಸಭಾ ಚುನಾವಣೆಯನ್ನು ಮಹಿಳಾ ಮೀಸಲಾತಿಯೊಂದಿಗೆ ನಡೆಸುವುದಾಗಿದೆ ಎಂದು ಸ್ಪಷ್ಟಪಡಿಸಿದರು. ವಿರೋಧ ಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದ ಸಚಿವ ಅಮಿತ್ ಶಾ, ೧೯೭೧ ರಲ್ಲಿ ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆನ್ನು ಕಾಂಗ್ರೆಸ್ ಪಕ್ಷವೇ ನಿರ್ಬಂಧಿಸಿತ್ತು ಮತ್ತು ಈಗಲೂ ಅವರು ಮಹಿಳಾ ಮೀಸಲಾತಿಯನ್ನು ಪರೋಕ್ಷವಾಗಿ ವಿರೋಧಿಸಿತ್ತಿದ್ದಾರೆ ಎಂದು ಆರೋಪಿಸಿದರು. ೨೦೨೩ರಲ್ಲಿ ಜಾರಿಗೆ ತರಲಾದ 'ನಾರಿ ಶಕ್ತಿ ವಂದನ್' ಅಧಿನಿಯಮದಡಿಯಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡುವ ಭರವಸೆಯನ್ನು ಈಡೇರಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಅವರು ಪುನರುಚ್ಚರಿಸಿದರು. ಸಚಿವ ಅಮಿತ್ ಶಾ ಅವರು ಉತ್ತರ ನೀಡಿದ ಬೆನ್ನಲ್ಲೇ ಸಂವಿಧಾನ ೧೩೧ ನೇ ತಿದ್ದುಪಡಿ ಮಸೂದೆಯನ್ನು ಮತಕ್ಕೆ ಹಾಕಲಾಯಿತು.

**<>><><*><><<>**

ಇದಕ್ಕೂ ಮುನ್ನಾ ಲೋಕಸಭೆಯಲ್ಲಿ ಸಂವಿಧಾನದ ೧೩೧ನೇ ತಿದ್ದುಪಡಿ, ಮಸೂದೆ, ಕ್ಷೇತ್ರ ಮರುವಿಂಗಡಣೆ ಮಸೂದೆ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾಯ್ದೆ ತಿದ್ದುಪಡಿ ಮಸೂದೆಗಳ ಕುರಿತು ಸುದೀರ್ಘ ಚರ್ಚೆ ನಡೆಯಿತು. ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ’ನಾರಿ ಶಕ್ತಿ ವಂದನ್ ಅಧಿನಿಯಮ’ವು ಮಹಿಳಾ ಸಬಲೀಕರಣಕ್ಕೆ ಪೂರಕವಾಗಿಲ್ಲ, ಬದಲಿಗೆ ಇದು ಚುನಾವಣಾ ನಕ್ಷೆಯನ್ನು ಬದಲಿಸುವ ತಂತ್ರವಾಗಿದೆ ಎಂದು ಟೀಕಿಸಿದರು. ಈ ಮಸೂದೆಯು ಹಿಂದುಳಿದ ಸಮುದಾಯಗಳ ಪ್ರಾತಿನಿಧ್ಯವನ್ನು ಕಸಿದುಕೊಳ್ಳಲಿದೆ ಎಂದು ಅವರು ಆರೋಪಿಸಿದರು. ರಾಹುಲ್ ಗಾಂಧಿ ಅವರ ಭಾಷಣದ ವೇಳೆ ಬಳಸಿದ ಕೆಲವು ಹೇಳಿಕೆಗಳಿಗೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಆಕ್ಷೇಪ ವ್ಯಕ್ತಪಡಿಸಿ, ಮಸೂದೆಯ ಅಂಶಗಳ ಮೇಲೆ ಗಮನ ಹರಿಸುವಂತೆ ಸೂಚಿಸಿದರು. ಇದೇ ವೇಳೆ, ಪ್ರಧಾನ ಮಂತ್ರಿಯವರ ವಿರುದ್ಧ ರಾಹುಲ್ ಗಾಂಧಿ ಮಾಡಿದ ವಾಗ್ದಾಳಿಯನ್ನು ಖಂಡಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ರಾಹುಲ್ ಗಾಂಧಿ ಅವರು ಕ್ಷಮೆಯಾಚಿಸಬೇಕು ಮತ್ತು ಅಂತಹ ಮಾತುಗಳನ್ನು ಕಲಾಪದ ದಾಖಲೆಯಿಂದ ತೆಗೆದುಹಾಕಬೇಕು ಎಂದು ಒತ್ತಾಯಿಸಿದರು. ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ ಅವರು ರಾಹುಲ್ ಗಾಂಧಿ ಅವರ ಮಾತುಗಳು ಅಸಂಸದೀಯ ಎಂದು ಖಂಡಿಸಿದರು. ಚರ್ಚೆಯಲ್ಲಿ ಪಾಲ್ಗೊಂಡ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು, ಮಹಿಳಾ ಮೀಸಲಾತಿ ಸಮಾಜಕ್ಕೆ ಮಹಿಳೆಯರು ನೀಡಿದ ಕೊಡುಗೆಗೆ ಸಿಕ್ಕ ಕಾನೂನುಬದ್ಧ ಮಾನ್ಯತೆ ಎಂದು ಬಣ್ಣಿಸಿದರು. ೨೦೨೩ರಲ್ಲಿ ಅಂಗೀಕರಿಸಲ್ಪಟ್ಟ ಮಹಿಳಾ ಮೀಸಲಾತಿ ಕಾನೂನನ್ನು ಕೇಂದ್ರ ಸರ್ಕಾರವು ಹಠಾತ್ತಾಗಿ ಅಧಿಸೂಚಿಸಿರುವುದಕ್ಕೆ ಡಿಎಂಕೆ ಸಂಸದರಾದ ಕನಿಮೊಳಿ ಆಕ್ಷೇಪ ವ್ಯಕ್ತಪಡಿಸಿದರು. ಸಂಸದರಾದ ಹೇಮಾ ಮಾಲಿನಿ, ಕಲ್ಯಾಣ್ ಬ್ಯಾನರ್ಜಿ, ಡಿಂಪಲ್ ಯಾದವ್ ಮತ್ತು ಹರಸಿಮ್ರತ್ ಕೌರ್ ಬಾದಲ್ ಸೇರಿದಂತೆ ಹಲವು ಗಣ್ಯರು ಚರ್ಚೆಯಲ್ಲಿ ಭಾಗವಹಿಸಿದ್ದರು. ಈ ಮಸೂದೆಗಳ ಮುಖ್ಯ ಉದ್ದೇಶವು ಇತ್ತೀಚಿನ ಜನಗಣತಿಯ ಆಧಾರದ ಮೇಲೆ ಕ್ಷೇತ್ರ ಮರು ವಿಂಗಡಣೆ ಪ್ರಕ್ರಿಯೆಯ ಮೂಲಕ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡಾ ೩೩ರಷ್ಟು ಮೀಸಲಾತಿಯನ್ನು ಜಾರಿಗೆ ತರುವುದಾಗಿದೆ.

<>><><*><><<>

ದೇಶದ ಅರ್ಧದಷ್ಟು ಜನಸಂಖ್ಯೆಯಾಗಿರುವ ಮಹಿಳೆಯರು ಮಹಿಳಾ ಮೀಸಲಾತಿಯ ಐತಿಹಾಸಿಕ ನಿರ್ಧಾರಕ್ಕಾಗಿ ಕಾಯುತ್ತಿದ್ದಾರೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಮಹಿಳಾ ಮೀಸಲಾತಿ ಮಸೂದೆಯನ್ನು ಬೆಂಬಲಿಸಿ ಮಾತನಾಡಿದ ಅವರು, ಪ್ರಸ್ತುತ ಲೋಕಸಭೆಯಲ್ಲಿ ಶೇಕಡಾ ೧೪ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಶೇಕಡಾ ೧೦ಕ್ಕಿಂತಲೂ ಕಡಿಮೆ ಇರುವ ಮಹಿಳಾ ಪ್ರಾತಿನಿಧ್ಯದ ಪ್ರಮಾಣ ನಿರಾಶದಾಯಕವಾಗಿದೆ ಎಂದರು.

<>><><*><><<>

೨೦೨೫-೨೬ನೇ ಸಾಲಿನ ಹಣಕಾಸು ವರ್ಷದಲ್ಲಿ ಕೇಂದ್ರ ಸರ್ಕಾರ, ೫೫ ಸಾವಿರಕ್ಕೂ ಹೆಚ್ಚು ನವೋದ್ಯಮಗಳನ್ನು ಗುರುತಿಸಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಈ ಕುರಿತು ಇಂದು ಅಂಕಿ-ಅಂಶ ಬಿಡುಗಡೆಗೊಳಿಸಿರುವ ಸಚಿವಾಲಯ, ಸ್ಟಾರ್ಟ್‌ಅಪ್ ಇಂಡಿಯಾ ಉಪಕ್ರಮ ಆರಂಭವಾದಾಗಿನಿಂದ ಒಂದೇ ವರ್ಷದಲ್ಲಿ ದಾಖಲಾದ ಅತಿ ಹೆಚ್ಚಿನ ಸಂಖ್ಯೆ ಇದಾಗಿದೆ

ಎಂದು ತಿಳಿಸಿದೆ. ಮಾರ್ಚ್ ೩೧ರ ಅಂಕಿಅಂಶಗಳ ಪ್ರಕಾರ, ಸ್ಟಾರ್ಟ್‌ಅಪ್ ಇಂಡಿಯಾ ಯೋಜನೆಯಡಿ ಅಧಿಕೃತವಾಗಿ ಗುರುತಿಸಲ್ಪಟ್ಟ ನವೋದ್ಯಮಗಳ ಸಂಖ್ಯೆ ೨ ಲಕ್ಷದ ೨೩ ಸಾವಿರ ಗಡಿ ದಾಟಿದೆ. ಇವುಗಳ ಮೂಲಕ ದೇಶದಲ್ಲಿ ಈವರೆಗೆ ೨೩ ಲಕ್ಷದ ೩೬ ಸಾವಿರಕ್ಕೂ ಹೆಚ್ಚು ನೇರ ಉದ್ಯೋಗಾವಕಾಶಗಳು ಸೃಷ್ಟಿಯಾಗಿವೆ. ೨೦೨೪-೨೫ರ ಹಣಕಾಸು ವರ್ಷಕ್ಕೆ ಹೋಲಿಸಿದರೆ, ೨೦೨೫-೨೬ರಲ್ಲಿ ನವೋದ್ಯಮಗಳ ನೋಂದಣಿಯಲ್ಲಿ ಶೇಕಡಾ ೫೧.೬ ರಷ್ಟು ಮತ್ತು ಉದ್ಯೋಗ ಸೃಷ್ಟಿಯಲ್ಲಿ ಶೇಕಡಾ ೩೬.೧ ರಷ್ಟು ವಾರ್ಷಿಕ ಪ್ರಗತಿ ಕಂಡುಬಂದಿದೆ.  ದೇಶದಲ್ಲಿ ನಾವೀನ್ಯತೆಯನ್ನು ಉತ್ತೇಜಿಸುವ, ಖಾಸಗಿ ಹೂಡಿಕೆಯನ್ನು ಪ್ರೋತ್ಸಾಹಿಸುವ ಮತ್ತು ಉದ್ಯಮಶೀಲತೆಗೆ ಪೂರಕವಾದ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಉದ್ದೇಶದೊಂದಿಗೆ ೨೦೧೬ರ ಜನವರಿ ೧೬ ರಂದು 'ಸ್ಟಾರ್ಟ್‌ಅಪ್ ಇಂಡಿಯಾ' ಅಭಿಯಾನಕ್ಕೆ ಚಾಲನೆ ನೀಡಲಾಗಿತ್ತು.

**<>><><*><><<>**

ರಾಜ್ಯಸಭೆಯ ಉಪಸಭಾಪತಿಯಾಗಿ ಸತತ ಮೂರನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾದ ಹರಿವಂಶ್ ಅವರಿಗೆ ಕಾಂಗ್ರೆಸ್ ಅಧ್ಯಕ್ಷ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ ಅಭಿನಂದನೆ ಸಲ್ಲಿಸಿದ್ದಾರೆ. ಮೇಲ್ಮನೆಯಲ್ಲಿ ವಿರೋಧ ಪಕ್ಷದ ಸದಸ್ಯರಿಗೆ ತಮ್ಮ ಸಮಸ್ಯೆಗಳನ್ನು ಪ್ರಸ್ತಾಪಿಸಲು ಹೆಚ್ಚಿನ ಸಮಯಾವಕಾಶ ನೀಡುವ ಮೂಲಕ ಹರಿವಂಶ್ ಅವರು ನ್ಯಾಯ ಒದಗಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.  ರಾಜ್ಯಸಭೆಯಲ್ಲಿ ಮಾತನಾಡಿದ ಅವರು, ಸಂಸದೀಯ ವ್ಯವಸ್ಥೆಯಲ್ಲಿ ವಿರೋಧ ಪಕ್ಷದ ಧ್ವನಿಗೆ ಆದ್ಯತೆ ನೀಡುವುದು ಆರೋಗ್ಯಕರ ಪ್ರಜಾಪ್ರಭುತ್ವದ ಲಕ್ಷಣ ಎಂದರು. ಇದೇ ವೇಳೆ, ೨೦೧೯ರಿಂದ ಲೋಕಸಭೆಯ ಉಪಸಭಾಧ್ಯಕ್ಷರ ಹುದ್ದೆ ಖಾಲಿ ಇರುವುದರ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ರಾಜಕೀಯ ಲೆಕ್ಕಾಚಾರಗಳನ್ನು ಬದಿಗಿಟ್ಟು, ಇಂತಹ ಸಾಂವಿಧಾನಿಕ ಹುದ್ದೆಗಳನ್ನು ವಿಳಂಬವಿಲ್ಲದೆ ಭರ್ತಿ ಮಾಡುವಂತೆ ಕೇಂದ್ರ ಸರ್ಕಾರವನ್ನು ಆಗ್ರಹಿಸಿದರು.

**<>><><*><><<>**

ನವದೆಹಲಿಯಲ್ಲಿ ನಡೆದ ಶಾಂಘೈ ಸಹಕಾರ ಸಂಘಟನೆ-ಎಸ್‌ಸಿಒ, ದ್ವಿಪಕ್ಷೀಯ ಸಮಾಲೋಚನೆಯಲ್ಲಿ ಭಾರತ ಮತ್ತು ಚೀನಾ, ಸಂಘಟನೆಯ ನಾಯಕರ ನಿರ್ಧಾರಗಳ ಅನುಷ್ಠಾನ ಹಾಗೂ ಮುಂದಿನ ಕಾರ್ಯತಂತ್ರಗಳ ಕುರಿತು ಚರ್ಚಿಸಿದವು.  ಭದ್ರತೆ, ವ್ಯಾಪಾರ ಮತ್ತು ಸಂಪರ್ಕ ವಲಯಗಳಲ್ಲಿ ಪರಸ್ಪರ ಸಹಕಾರವನ್ನು ಬಲಪಡಿಸಲು ಉಭಯ ದೇಶಗಳು ಸಮ್ಮತಿಸಿವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಭಾರತದ ಎಸ್‌ಸಿಒ, ರಾಷ್ಟ್ರೀಯ ಸಂಯೋಜಕ ಅಲೋಕ್ ಎ.ದಿಮ್ರಿ ಮತ್ತು ಚೀನಾದ ರಾಷ್ಟ್ರೀಯ ಸಂಯೋಜಕ ಯಾನ್ ವೆನ್ಬಿನ್ ನೇತೃತ್ವದ ನಿಯೋಗಗಳು ಈ ಸಭೆಯಲ್ಲಿ ಭಾಗವಹಿಸಿ ವಿವಿಧ ಕ್ಷೇತ್ರಗಳ ಪ್ರಗತಿಯನ್ನು ಪರಾಮರ್ಶಿಸಿದವು.

**<>><><*><><<>**

೨೦೨೬ನೇ ಸಾಲಿನ ಭಾರತದ ಹಜ್ ಯಾತ್ರೆ ನಾಳೆಯಿಂದ ಅಧಿಕೃತವಾಗಿ ಆರಂಭಗೊಳ್ಳಲಿದ್ದು, ಮೊದಲ ತಂಡ ದೇಶದ ವಿವಿಧ ಕೇಂದ್ರಗಳಿಂದ ಸೌದಿ ಅರೇಬಿಯಾಕ್ಕೆ ಪ್ರಯಾಣ ಬೆಳೆಸಲಿದೆ. ಈ ವರ್ಷ ಸುಮಾರು ಒಂದು ಲಕ್ಷದ ೭೫ ಸಾವಿರಕ್ಕೂ ಹೆಚ್ಚು ಯಾತ್ರಿಕರು ಈ ಪವಿತ್ರ ಯಾತ್ರೆಯಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಕೇಂದ್ರ ಅಲ್ಪ ಸಂಖ್ಯಾತ ವ್ಯವಹಾರಗಳ ಸಚಿವಾಲಯ ಮಾಹಿತಿ ನೀಡಿದೆ. ಈ

ಹಿನ್ನೆಲೆಯಲ್ಲಿ ಯಾತ್ರಿಕರಿಗೆ ಶುಭಾಶಯ ಕೋರಿರುವ ಕೇಂದ್ರ ಸಚಿವ ಕಿರಣ್ ರಿಜಿಜು, ಯಾತ್ರೆಯು ಸುಗಮ ಮತ್ತು ಸುರಕ್ಷಿತವಾಗಿ ನಡೆಯುವಂತೆ ನೋಡಿಕೊಳ್ಳಲು ಸರ್ಕಾರ ಬದ್ಧವಾಗಿದೆ ಎಂದರು.

**<>><><*><><<>**

ಡರ್ಬನ್‌ನ ಕಿಂಗ್ಸ್ ಮೀಡ್ ಕ್ರೀಡಾಂಗಣದಲ್ಲಿ ಇಂದು ಭಾರತ ಮತ್ತು ದಕ್ಷಿಣ ಆಫ್ರಿಕಾ ವನಿತಾ ತಂಡಗಳ ನಡುವಿನ ಐದು ಪಂದ್ಯಗಳ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಗೆ ಚಾಲನೆ ದೊರೆಯಲಿದೆ. ಇಂದು ನಡೆಯಲಿರುವ ಸರಣಿಯ ಮೊದಲ ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯.೩೦ ಕ್ಕೆ ಆರಂಭವಾಗಲಿದೆ. ಈ ಹಿಂದೆ ಉಭಯ ತಂಡಗಳು, ಕೊನೆಯ ಬಾರಿ ೨೦೨೫ ರ ಮಹಿಳಾ ಏಕದಿನ ವಿಶ್ವಕಪ್ ಫೈನಲ್‌ನಲ್ಲಿ ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಭಾರತೀಯ ಮಹಿಳಾ ತಂಡ ೫೨ ರನ್‌ಗಳಿಂದ ಜಯ ಸಾಧಿಸಿ ಟ್ರೋಫಿ ತನ್ನದಾಗಿಸಿಕೊಂಡಿತು.

**<>><><*><><<>**

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ, ಗುಜರಾತ್ ಟೈಟನ್ಸ್ ಮತ್ತು ಕೋಲ್ಕತ್ತಾ ನೈಟ್‌ರೈಡರ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಕೋಲ್ಕತ್ತಾ ನೈಟ್‌ರೈಡರ್ಸ್ ತಂಡ ಬ್ಯಾಟಿಂಗ್ ಆಯ್ದುಕೊಂಡಿದೆ.

**<>><><*><><<>**

ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಅವರು ನವದೆಹಲಿಯಲ್ಲಿಂದು ಉಕ್ರೇನ್‌ನ ರಾಷ್ಟ್ರೀಯ ಭದ್ರತೆ ಮತ್ತು ರಕ್ಷಣಾ ಮಂಡಳಿಯ ಕಾರ್ಯದರ್ಶಿ ರುಸ್ಥೆಮ್ ಉಮೆರೋವ್ ಅವರನ್ನು ಭೇಟಿಯಾದರು. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್ ಮಾಡಿರುವ ಸಚಿವರು, ಭೇಟಿಯ ಸಮಯದಲ್ಲಿ ಭಾರತ ಮತ್ತು ಉಕ್ರೇನ್ ನಡುವಿನ ದ್ವಿಪಕ್ಷೀಯ ಸಹಕಾರದ ಬಗ್ಗೆ ಚರ್ಚಿಸಲಾಯಿತು. ಇದೇ ವೇಳೆ, ಉಕ್ರೇನ್ ಸಂಘರ್ಷದ ಬಗ್ಗೆಯೂ ವಿಚಾರ ವಿನಿಮಯ ಮಾಡಿಕೊಳ್ಳಲಾಯಿತು ಎಂದು ತಿಳಿಸಿದ್ದಾರೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**